**ಕರ್ನಾಟಕ ಸರ್ಕಾರ**

1 ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ (10)11
2 ಸದಸ್ಯರ ಹೆಸರು ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ
3 ಉತ್ತರಿಸಬೇಕಾದ ದಿನಾಂಕ 02/03/2020
4 ಉತ್ತರಿಸಬೇಕಾದ ಸಚಿವರು ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು

| ಕ್ರ. ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ) | ರಾಜ್ಯದಲ್ಲಿ ಸಾವಿರಾರು ಮಂದಿ ಕ್ಯಾನ್ಸರ್ ಪೀಡಿತರಾಗಿ ಮರಣ ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಹೌದು.<br><br>2015 ರ ಅಂದಾಜು ಪ್ರಕಾರ ಕರ್ನಾಟಕದಲ್ಲಿ ಸುಮಾರು 51000 ಹೊಸ ಕ್ಯಾನ್ಸರ್ ರೋಗಿಗಳು ಇದ್ದು, 2020 ರಲ್ಲಿ ಇದು ಸುಮಾರು 70000 ತಲುಪಬಹುದೆಂದು ಅಂದಾಜಿಸಲಾಗಿದೆ. |
| ಆ) | ರಾಜ್ಯದಲ್ಲಿ ಕಳೆದ 5 ವರ್ಷಗಳಲ್ಲಿ ಶೇ.25 ರಷ್ಟು ಕ್ಯಾನ್ಸರ್ ರೋಗಿಗಳ ಪ್ರಮಾಣ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಬಂದಿದಲ್ಲಿ, ಸರ್ಕಾರ ಈ ಬಗ್ಗೆ ತೆಗೆದುಕೊಂಡ ಕ್ರಮಗಳೇನು? | ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯಲ್ಲಿ ಕ್ಯಾನ್ಸರ್ ರೋಗಕ್ಕೆ ಬೇಕಾದ ಎಲ್ಲಾ ಅತ್ಯಾಧುನಿಕ ಚಿಕಿತ್ಸಾ ಸೌಲಭ್ಯಗಳಾದ ರೋಬೋಟಿಕ್ಸ್ ಶಸ್ತ್ರಚಿಕಿತ್ಸೆ, ವಿಕಿರಣ ಚಿಕಿತ್ಸೆ, (ರೇಡಿಯೇಷನ್‌ಥೆರಪಿ) ರಾಸಾಯನಿಕ ಚಿಕಿತ್ಸೆ (ಕಿಮೋಥೆರಪಿ) ಹಾಗೂ ನೋವು ಉಪಶಮನ ಚಿಕಿತ್ಸೆಗಳು (ಪ್ಯಾಲಿಯೇಟೀವ್ ಕೇರ್) ಲಭ್ಯವಿರುತ್ತದೆ. ಮುಂದಿನ ದಿನಗಳಲ್ಲಿ ಪೆಟ್ ಸ್ಕಾನ್ ಹಾಗೂ ಬೋನ್ ಮ್ಯಾರೋ ಟ್ರಾನ್ಸ್ ಪ್ಲಾಂಟ್ ಚಿಕಿತ್ಸಾ ಸೌಲಭ್ಯವನ್ನು ಲಭ್ಯಪಡಿಸಲು ಕ್ರಮವಹಿಸಲಾಗಿದೆ.<br><br>ಅಲ್ಲದೇ, ಹೆಚ್ಚುತ್ತಿರುವ ಕ್ಯಾನ್ಸರ್ ರೋಗಿಗಳ ಚಿಕಿತ್ಸೆಗಾಗಿ ಮತ್ತು ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯ ಹೊರೆಯನ್ನು ಕಡಿಮೆ ಮಾಡಲು ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗಿದೆ.<br><br>• ಕಲ್ಬುರ್ಗಿಯಲ್ಲಿ ಕ್ಯಾನ್ಸರ್ ಚಿಕಿತ್ಸಾ ಘಟಕವನ್ನು ಸ್ಥಾಪಿಸಲಾಗಿದೆ.<br>• ಮಂಡ್ಯದಲ್ಲಿ ಟರ್ಷಿಯರಿ ಕ್ಯಾನ್ಸರ್ ಚಿಕಿತ್ಸಾ ಕೇಂದ್ರವನ್ನು ಉನ್ನತೀಕರಿಸಲಾಗುತ್ತಿದೆ.<br>• ತುಮಕೂರಿನಲ್ಲಿ ಕ್ಯಾನ್ಸರ್ ಚಿಕಿತ್ಸಾ ಕೇಂದ್ರದ ಕಟ್ಟಡ ಕಾಮಗಾರಿಯನ್ನು ಶೀಘ್ರದಲ್ಲೇ ಪ್ರಾರಂಭಿಸಲು ಕ್ರಮವಹಿಸಲಾಗಿದೆ.<br>• ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಕಿಮ್ಸ್, ಹುಬ್ಬಳ್ಳಿ ಹಾಗೂ |

| | | |
|---|---|---|
| | | • ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಲ್ಲಿ<br>• ಹಾಲಿ ಇರುವ ಕ್ಯಾನ್ಸರ್ ಸೌಲಭ್ಯವನ್ನು ಉನ್ನತೀಕರಿಸಲು ಕ್ರಮವಹಿಸಲಾಗಿದೆ.<br>• ಬಿಜಾಪುರ ಮತ್ತು ಕಾರವಾರದಲ್ಲಿ ಹೊಸ ಕ್ಯಾನ್ಸರ್ ಚಿಕಿತ್ಸಾ ಘಟಕಗಳನ್ನು ಪ್ರಾರಂಭಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ. |
| ಇ) | ರಾಜ್ಯವು ದೇಶದಲ್ಲಿಯೇ ಅತೀ ಹೆಚ್ಚು ಕ್ಯಾನ್ಸರ್ ರೋಗಿಗಳನ್ನು ಹೊಂದಿರುವುದು ನಿಜವೇ; ಹಾಗಿದ್ದಲ್ಲಿ, ರಾಜ್ಯದಲ್ಲಿ ಮಾತ್ರ ಕ್ಯಾನ್ಸರ್ ರೋಗದ ಪ್ರಮಾಣ ಹೆಚ್ಚಾಗಲು ಕಾರಣವೇನು; ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು? | ಭಾರತ ದೇಶದಲ್ಲಿ ಹೆಚ್ಚು ಕ್ಯಾನ್ಸರ್ ರೋಗಿಗಳನ್ನು ಹೊಂದಿರುವುದರಲ್ಲಿ ಕರ್ನಾಟಕಕ್ಕೆ 5ನೇ ಸ್ಥಾನವಿದೆ.<br><br>ಪಾಶ್ಚಿಮಾತ್ಯ ಜೀವನ ಶೈಲಿ, ತಂಬಾಕು ಸೇವನೆ, ಆಹಾರ ಪದ್ಧತಿ, ಅತಿಯಾದ ಕರಿದ ಹಾಗೂ ಮಸಾಲೆಯುಕ್ತ ಆಹಾರ ಸೇವನೆ, ಅತಿಯಾದ ಕೊಬ್ಬುಯುಕ್ತ ಆಹಾರ ಸೇವನೆ, ದೈಹಿಕ ವ್ಯಾಯಾಮ ಇಲ್ಲದೇ ಇರುವುದು, ಪರಿಸರ ಮಾಲಿನ್ಯ ಹಾಗೂ ಅಸುರಕ್ಷಿತ ಲೈಂಗಿಕತೆ ಇತ್ಯಾದಿ ಕಾರಣಗಳಿಂದಾಗಿ ಕ್ಯಾನ್ಸರ್ ರೋಗದ ಪ್ರಮಾಣದಲ್ಲಿ ಹೆಚ್ಚಳವಾಗುತ್ತಲಿದೆ. ಕೆಲವು ಕ್ಯಾನ್ಸರ್ ರೋಗಗಳಾದ ಸ್ತನ ಕ್ಯಾನ್ಸರ್, ಅಂಡಾಶಯ ಇತ್ಯಾದಿಗಳು ಅನುವಂಶೀಯವಾಗಿರುತ್ತವೆ.<br><br>ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯ ವತಿಯಿಂದ ಕ್ಯಾನ್ಸರ್ ಜಾಗೃತಿ ಕಾರ್ಯಕ್ರಮಗಳನ್ನು ಹಾಗೂ ಶೀಘ್ರ ಪತ್ತೆ ಹಚ್ಚುವ ಕಾರ್ಯಕ್ರಮಗಳನ್ನು ರಾಜ್ಯಾದ್ಯಂತ ಹಮ್ಮಿಕೊಳ್ಳಲಾಗಿದ್ದು, ಕ್ಯಾನ್ಸರ್ ರೋಗವನ್ನು ತಡೆಗಟ್ಟಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. |
| ಈ) | ಈ) ಸಾರ್ವಜನಿಕರಿಗೆ ಈ ರೋಗದ ಬಗ್ಗೆ ಜಾಗೃತಿ ಮೂಡಿಸಿ ಮನವರಿಕೆ ಮಾಡಿಕೊಡಲು ಫೆಬ್ರುವರಿ-4 ರಂದು ರಾಜ್ಯ ಸರ್ಕಾರ ವಿಶೇಷವಾಗಿ ಕ್ಯಾನ್ಸರ್ ಅರಿವು ಮೂಡಿಸುವ ದಿನವನ್ನಾಗಿ ಆಚರಿಸದಿರಲು ಕಾರಣಗಳೇನು; ಮುಂದೆಯಾದರೂ ಸರ್ಕಾರ ಕ್ರಮ ಕೈಗೊಳ್ಳುವುದೇ? | ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯಲ್ಲಿ 4ನೇ ಫೆಬ್ರುವರಿ 2020 ರಂದು ವಿಶ್ವ ಕ್ಯಾನ್ಸರ್ ದಿನಾಚರಣೆಯನ್ನು ಆಚರಿಸಲಾಯಿತು. ಸದರಿ ದಿನಾಚರಣೆಯ ಅಂಗವಾಗಿ ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯ ರಾಜ್ಯ ಕುಟುಂಬ ಕಲ್ಯಾಣ ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಅಸಾಂಕ್ರಾಮಿಕ ರೋಗಗಳ ವಿಭಾಗದವರಿಂದ ಜಂಟಿಯಾಗಿ ಸಂಸ್ಥೆಯಲ್ಲಿ ಕ್ಯಾನ್ಸರ್ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಕಿದ್ವಾಯಿ ಸ್ಮಾರಕ ಗಂಥಿ ಸಂಸ್ಥೆಯ ನಿರ್ದೇಶಕರು ಹಾಗೂ ತಜ್ಞ ವೈದ್ಯರು ಹಲವಾರು ಮಾಧ್ಯಮಗಳ ಮೂಲಕ ವಿಶ್ವ ಕ್ಯಾನ್ಸರ್ ದಿನಾಚರಣೆಯ ಜಾಗೃತಿ ಕಾರ್ಯಕ್ರಮವನ್ನು ನಡೆಸಿರುತ್ತಾರೆ. |

ಸಂಖ್ಯೆ: ಎಂಇಡಿ 39 ಕೆಎಂ 2020

(ಡಾ|| ಕೆ. ಸುಧಾಕರ್)
ವೈದ್ಯಕೀಯ ಶಿಕ್ಷಣ ಸಚಿವರು